# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 352 (464)
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 19.08.2026
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೃಷಿ ಭೂಮಿಯನ್ನು ವಸತಿ, ಹಾಗೂ ಇತರೆ ಉದ್ದೇಶಗಳಿಗೆ ಭೂಪರಿವರ್ತನೆ ಮಾಡುವ ಸಂದರ್ಭದಲ್ಲಿ ಕಂದಾಯ, ನಗರಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ, ಲೋಕೋಪಯೋಗಿ, ಅರಣ್ಯ ಹಾಗೂ ಇತರೆ ಸಂಬಂಧಿತ ಇಲಾಖೆಗಳ ನಿಯಮಗಳ ನಡುವೆ ಸಮನ್ವಯದ ಕೊರತೆಯಿಂದ ರಸ್ತೆ, ಹಾಗೂ ಸಾರ್ವಜನಿಕ ಬಳಕೆಯ ಜಾಗಗಳಿಗೆ ಸಂಬಂಧಿಸಿದ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ |
| ಆ) | ಈ ಮೊದಲು 94C, 94CC ಹಾಗೂ ಹಕ್ಕುಪತ್ರಗಳ ಮೂಲಕ ಮಂಜೂರಾದ ಜಮೀನುಗಳಿಗೆ ಹಾಗೂ ಇತರ ಯಾವುದೇ ಖಾಸಗಿ ಜಮೀನುಗಳಿಗೆ ಸಾರ್ವಜನಿಕ ರಸ್ತೆ, ನೈಸರ್ಗಿಕ ನೀರು ಹರಿಯುವದಾರಿ, ಇತರೆ ಸಾರ್ವಜನಿಕ ಉಪಯೋಗದ ಜಾಗಗಳನ್ನು ಕಂದಾಯ ದಾಖಲೆಗಳಲ್ಲಿ ದಾಖಲಿಸಲು ಏನು ಕ್ರಮವಹಿಸಲಾಗಿದೆ; ಸರ್ಕಾರಿ ಜಮೀನಿನಲ್ಲಿರುವ ರಸ್ತೆಗಳನ್ನು ಸಂಬಂಧಿತ ಸ್ಥಳೀಯ ಸಂಸ್ಥೆ/ ಸಕ್ಷಮ ಪ್ರಾಧಿಕಾರಕ್ಕೆ ಅಧಿಕೃತವಾಗಿ ಹಸ್ತಾಂತರಿಸುವ ವ್ಯವಸ್ಥೆ ಬಗ್ಗೆ ಮಾಹಿತಿ ಒದಗಿಸುವುದು; | ಈ ಮೊದಲು 94ಸಿ, 94ಸಿಸಿ ಹಾಗೂ ಹಕ್ಕುಪತ್ರಗಳ ಮೂಲಕ ಮಂಜೂರಾದ ಜಮೀನುಗಳಿಗೆ ಹಾಗೂ ಇತರ ಯಾವುದೇ ಖಾಸಗಿ ಜಮೀನುಗಳಿಗೆ ಸಂಬಂಧಪಟ್ಟಂತೆ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 71 ರಂತೆ ಜಮೀನು ಕಾಯ್ದಿರಿಸಿದ ಪ್ರಕರಣದ ಪಹಣಿ ಕಲಂ 11 ರ ಹಕ್ಕುಗಳು ಮತ್ತು ಋಣಗಳ ಕಲಂ ನಲ್ಲಿ ವಿವರಗಳನ್ನು ದಾಖಲಿಸಲಾಗಿರುತ್ತದೆ.<br><br>ಸರ್ಕಾರಿ ಜಮೀನಿನಲ್ಲಿರುವ ರಸ್ತೆಗಳನ್ನು ಸಂಬಂಧಿತ ಸ್ಥಳೀಯ ಸಂಸ್ಥೆ/ಸಕ್ಷಮ ಪ್ರಾಧಿಕಾರಕ್ಕೆ ಅಧಿಕೃತವಾಗಿ ಹಸ್ತಾಂತರಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಈ ಮೊದಲು ನೀಡಿದ ಹಕ್ಕುಪತ್ರಗಳು ತಪ್ಪು ಸರ್ವೆ ಸಂಖ್ಯೆ/ ತಪ್ಪು ಫಲಾನುಭವಿ ಅಥವಾ ತಪ್ಪು ಸ್ಥಳಕ್ಕೆ ನೀಡಿರುವುದು/ ದಾಖಲೆಗಳಲ್ಲಿ ತಪ್ಪಾಗಿ ನಮೂದಿಸಿರುವುದು ಕಂಡುಬಂದರೆ, ಅವುಗಳನ್ನು ಸರಿಪಡಿಸಲು ಇರುವ ನಿಯಮ ಮತ್ತು ಪ್ರಕ್ರಿಯೆಗಳೇನು; ಏಕರೂಪದ SOP ಇದೆಯೇ ಎಂಬುದರ ವಿವರ ಒದಗಿಸುವುದು; | ಸರ್ಕಾರದ ಆದೇಶ ಸಂಖ್ಯೆ: ಕಂಇ 156 ಎಸ್ ಎಸ್ ಎಂ 2024, ದಿನಾಂಕ 25/11/2024 ರಲ್ಲಿ ನೀಡಿರುವ ಮಾರ್ಗಸೂಚಿಗಳಂತೆ ಕ್ರಮವಹಿಸಲಾಗುತ್ತಿದೆ. |
| ಈ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಈ ಮೇಲಿನ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ರೂಪಿಸಲು ಏಕರೂಪದ SOP ರಚಿಸಿ ಕಾಲಬದ್ಧ ವಿಶೇಷ ಕಾರ್ಯಯೋಜನೆ ರೂಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

**ಸಂಖ್ಯೆ: ಆರ್‌ಡಿ 159 ಎಲ್‌ಜಿಕ್ಯೂ 2026**

(ಡಾ: ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿಗಳು